ಅ. ಶಿವಮೊಗ್ಗ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸ್ವಜಲಧಾರ ಯೋಜನೆಯಲ್ಲಿ ಗ್ರಾಮೀಣ ನೀರು ಸರಬರಾಜು ಯೋಜನೆಗೆ ಆಯ್ಕೆ ಮಾಡಲಾದ ಗ್ರಾಮಗಳ ಸಂಖ್ಯೆ ಎಷ್ಟು ಹಾಗೂ ಯಾವಾಗ ಪ್ರಾರಂಭ ಮಾಡಲಾಗುವುದು; (ವಿವರ ನೀಡುವುದು)?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ಸಚಿವರು)

ಅ. ಶಿವಮೊಗ್ಗ ಜಿಲ್ಲೆಯಲ್ಲಿ ರೂ. 100.80ಲಕ್ಷ ಅಂದಾಜಿನ 23 ಪ್ರಸ್ತಾವನೆಗಳು ಸ್ವಜಲಧಾರ ಯೋಜನೆಯಡಿ ಸ್ವೀಕೃತಿಯಾಗಿರುತ್ತವೆ. ಈ ಸಲುವಾಗಿ ಒಟ್ಟು ರೂ. 7.87 ಲಕ್ಷ ಸಮುದಾಯ ವಂತಿಗೆ ಸಂಗ್ರಹವಾಗಿರುತ್ತದೆ. ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಕೇಂದ್ರ ಸರ್ಕಾರದ ಅನುಮೋದನೆಗಾಗಿ ಕಳುಹಿಸಲಾಗುತ್ತಿದೆ.

ಶಿವಮೊಗ್ಗ ನಗರಕ್ಕೆ ಸರ್ಕಾರಿ ನರ್ಸಿಂಗ್ ಕಾಲೇಜು ಮಂಜೂರು

1460(1536) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಶಿವಮೊಗ್ಗ ನಗರಕ್ಕೆ ಸರ್ಕಾರಿ ನರ್ಸಿಂಗ್ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ, ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಡಾ: ಎ.ಬಿ. ಮಾಲಕರಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ. ಸಧ್ಯಕ್ಕೆ ಇಲ್ಲ.

ಶಿವಮೊಗ್ಗ ನಗರದಲ್ಲಿ ಆರ್ಯುವೇದ ಆಸ್ಪತ್ರೆ ಕಟ್ಟಡ

1461(1537) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಶಿವಮೊಗ್ಗ ನಗರದಲ್ಲಿ ಕಟ್ಟುತ್ತಿರುವ ಜಿಲ್ಲಾ ಆಯುರ್ವೇದ ಆಸ್ಪತ್ರೆ ಕಟ್ಟಡ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ; ಈವರೆಗೆ ಎಷ್ಟು ಹಣ ಖರ್ಚಾಗಿರುತ್ತದೆ; (ವಿವರ ತಿಳಿಸುವುದು)?

ಶ್ರೀಮತಿ ನಫೀಸ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು)

ಅ. ಶಿವಮೊಗ್ಗ ಜಿಲ್ಲಾ ಸರ್ಕಾರಿ ಆಯುರ್ವೇದ ಆಸ್ಪತ್ರೆಯನ್ನು ರೂ. 50.00 ಲಕ್ಷ ವೆಚ್ಚದಲ್ಲಿ ನಿರ್ಮಿಸಲು ಕ್ರಮ ಕೈಗೊಂಡಿದ್ದು, ಈವರೆಗೂ ರೂ. 11.00 ಲಕ್ಷ ಹಣ ಖರ್ಚಾಗಿರುತ್ತದೆ. ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ.

ಕೇಂದ್ರ ಸರ್ಕಾರದಿಂದ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳಿಗೆ ಅನುದಾನ

1462(1547) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಿಂದ ವಿವಿಧ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಕ್ಕೆ ನಿಗದಿಗೊಳಿಸಿದ ಹಣ ಎಷ್ಟು? ಬಿಡುಗಡೆಯಾದ ಹಣ ಎಷ್ಟು? ಖರ್ಚಾದ ಹಣ ಎಷ್ಟು?